## ವಿಧಾನ ಪರಿಷತ್ತು ಮಾನ್ಯ ಸದಸ್ಯರಾದ ಶ್ರೀ ಗೋವಿಂದರಾಜು ರವರು ಶೂನ್ಯವೇಳೆಯಲ್ಲಿ ನೀಡಿರುವ ಸೂಚನೆಗೆ ಉತ್ತರ

ವಿಷಯ: ಕೋಲಾರ ಜಿಲ್ಲೆಯಲ್ಲಿ ಅಪರಾಧ ಪ್ರಕರಣಗಳು ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಎಚ್ಚೆತ್ತುಕೊಂಡಿರುವ ಪೊಲೀಸರು ಅಕ್ರಮ ಮದ್ಯ ಹಾಗೂ ಮಾದಕ ವಸ್ತುಗಳ ಮಾರಾಟ ತಡೆಗೆ ಮುಂದಾಗಿದ್ದಾರೆ. ಆದರೆ ಸಂಬಂಧಿಸಿದ ಇಲಾಖೆಗಳು ಮಾತ್ರ ಗಾಢ ನಿದ್ರೆಯಿಂದ ಹೊರಬಂದಿಲ್ಲ. ಚಿಲ್ಲರೆ ಅಂಗಡಿಗಳಲ್ಲಿ ಅಕ್ರಮವಾಗಿ ಮಾರಾಟ ಮಾಡದಂತೆ ಪೊಲೀಸರೇ ಕ್ರಮಕೈಗೊಳ್ಳಬೇಕು. ಜಿಲ್ಲೆಯಲ್ಲಿರುವ ಮೆಡಿಕಲ್ ಶಾಪ್‌ಗಳಿಗೆ ಹೋಗಿ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿದ್ದಾರೆಯೇ ಎಂಬುದನ್ನೂ ಪೊಲೀಸರೇ ಪರಿಶೀಲಿಸಬೇಕಾದ ಪರಿಸ್ಥಿತಿ ಕೋಲಾರದಲ್ಲಿ ನಿರ್ಮಾಣವಾಗಿದೆ. ಆದರೆ, ಅಕ್ರಮ ಮದ್ಯ ಮಾರಾಟ ನಿಯಂತ್ರಣ ಜವಾಬ್ದಾರಿ ಹೊತ್ತಿರುವಂತಹ ಅಬಕಾರಿ ಇಲಾಖೆಯ ಅಧಿಕಾರಿಗಳು ಅಕ್ರಮ ಮದ್ಯ ಮಾರಾಟ ವಿಚಾರದಲ್ಲಿ ಮೃದುಧೋರಣೆ ಅನುಸರಿಸುತ್ತಿದ್ದು, ಜಿಲ್ಲೆಯಲ್ಲಿರುವ ಮೆಡಿಕಲ್ ಶಾಪ್‌ಗಳಿಗೆ ನಿಯಮಿತವಾಗಿ ಭೇಟಿ ನೀಡಿ ಪರಿಶೀಲನೆ ಮಾಡಬೇಕೆಂಬುದನ್ನು ಸಹಾಯಕ ಔಷಧ ನಿಯಂತ್ರಕರು ಮರೆತಿದ್ದಾರೆಂಬ ಟೀಕೆಗಳು ಕೇಳಿಬಂದಿದೆ.

ಜಿಲ್ಲೆಯಲ್ಲಿರುವ ಮೆಡಿಕಲ್ ಶಾಪ್‌ಗಳು ಸಮರ್ಪಕವಾಗಿ ಕೆಲಸ ನಿರ್ವಹಿಸುತ್ತಿವೆಯೇ ಎಂಬುದನ್ನು ಪರಿಶೀಲಿಸುವ ಜವಾಬ್ದಾರಿ ಸಹಾಯಕ ಔಷಧ ನಿಯಂತ್ರಕರು ಹೊಂದಿದ್ದಾರೆ. ಅದರಂತೆ ಲೈಸೆನ್ಸ್ ಹೊಂದಿರುವ ವ್ಯಕ್ತಿಗಳೇ ಔಷಧ ಅಂಗಡಿ ನಡೆಸುತ್ತಿದ್ದಾರಾ? ಅವಧಿ ಮೀರಿದ ಔಷಧಗಳನ್ನು ಮಾರಾಟ ಮಾಡುತ್ತಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳುವುದು ಹಾಗೂ ಯಾವುದೇ ರೀತಿಯ ಮಾದಕ ವಸ್ತುಗಳನ್ನು ಮಾರಾಟ ಮಾಡುತ್ತಿಲ್ಲ ಎಂಬುದನ್ನು ಆಗಾಗ ಭೇಟಿ ನೀಡಿ ಪರಿಶೀಲಿಸಿಕೊಳ್ಳಬೇಕು. ಆದರೆ, ಅಧಿಕಾರಿಗಳು ಮೆಡಿಕಲ್ ಶಾಪ್‌ಗಳ ಪರವಾನಗಿ ನವೀಕರಣಕ್ಕೆ ತೋರುವಂತಹ ಉತ್ಸಾಹವನ್ನು ಇಂತಹ ಕೆಲಸಗಳಿಗೆ ತೋರುವುದಿಲ್ಲ. ಕನಿಷ್ಟ ವರ್ಷದಲ್ಲಿ ಒಂದು ಬಾರಿಯೂ ಭೇಟಿ ನೀಡಿ ಪರಿಶೀಲಿಸುವುದಿಲ್ಲ. ಬದಲಿಗೆ ಇಲಾಖೆಯ ಅಧಿಕಾರಿಗಳು ಶಾಪ್ ಮಾಲೀಕರೊಂದಿಗೆ ಬೇರೆ ರೀತಿಯ ಸಂಬಂಧ ಹೊಂದಿದ್ದಾರೆಂಬ ಆರೋಪಗಳು ಕೇಳಿಬರುತ್ತಿವೆ. ಈ ರೀತಿಯಾಗಿ ಕರ್ತವ್ಯಲೋಪ ಎಸಗುತ್ತಿರುವ ಅಧಿಕಾರಿಗಳ ಸೇವೆಯೂ ಕೋಲಾರ ಜಿಲ್ಲೆಗೆ ಅವಶ್ಯಕತೆ ಇದೆಯೇ ಎಂಬ ಪ್ರಶ್ನೆ ಮೂಡುತ್ತದೆ. ಈ ವಿಷಯವು ಸಾರ್ವಜನಿಕ ಹಿತದೃಷ್ಟಿಯಿಂದ. ಶೂನ್ಯ ವೇಳೆಯಲ್ಲಿ ಪ್ರಸ್ತಾಪಿಸಲು ಅನುಮತಿ ನೀಡಬೇಕೆಂದು ಕೋರುತ್ತೇನೆ.

ಉತ್ತರ : ಕೋಲಾರ ಜಿಲ್ಲೆಯಲ್ಲಿನ ಮೆಡಿಕಲ್ ಶಾಪ್‌ಗಳಲ್ಲಿ ಅಕ್ರಮವಾಗಿ ನಿಷೇದಿತ ಔಷಧಿಗಳನ್ನು ವೈದ್ಯರ ಚೀಟಿಯಿಲ್ಲದೆ ನೀಡುವುದರ ಬಗ್ಗೆ ಹಾಗೂ ಔಷಧಿಯಾಗಿ ಉಪಯೋಗಿಸುವ ಅಮಲು ಬರುವಂತಹ ಮಾದಕ ಔಷಧಿಗಳನ್ನು ಮಾರಾಟ ಮಾಡಲಾಗುತ್ತಿದೆಯೇ ಎಂಬುವದರ ಬಗ್ಗೆ ಕೋಲಾರ ಜಿಲ್ಲೆಯಾದ್ಯಂತ ಎಲ್ಲಾ ಪೋಲೀಸ್ ಅಧಿಕಾರಿಗಳು ಔಷಧ ನಿಯಂತ್ರಕರ ಸಹಯೋಗದೊಂದಿಗೆ ಪರಿಶೀಲನೆಯನ್ನು ಕೈಗೊಳ್ಳಲಾಗುತ್ತಿದ್ದು ಯಾವುದೇ ನಿಷೇಧಿತ ಔಷಧಿ ಮಾರಾಟ ಮಾಡುವುದು ಕಂಡು ಬಂದಲ್ಲಿ, ಅಂತಹ ಔಷಧಿ ಅಂಗಡಿಗಳ ವಿರುದ್ಧ ಕಾನೂನು ಕ್ರಮಕೈಗೊಳ್ಳುವುದಾಗಿ ಎಚ್ಚರಿಕೆ ನೀಡಲಾಗಿರುತ್ತದೆ. ಕೋಲಾರ ಜಿಲ್ಲಾ ಪೋಲೀಸ್ ಇಲಾಖೆಯಿಂದ ಒಟ್ಟು 1164 ಮೆಡಿಕಲ್ ಶಾಪ್‌ಗಳನ್ನು ಪರಿಶೀಲಿಸಲಾಗಿದ್ದು, ಮಾದಕ ವಸ್ತುಗಳ ಮಾರಾಟ ಕಂಡುಬಂದಿರುವುದಿಲ್ಲ.

...2

Scanned with CamScanner

<u>ಅಕ್ರಮ ಮದ್ಯ ಮಾರಾಟದ ಬಗ್ಗೆ.</u>

ಅಕ್ರಮ ಮದ್ಯ ಮಾರಾಟದ ಬಗ್ಗೆ ಜಿಲ್ಲೆಯ ಎಲ್ಲಾ ಪೊಲೀಸ್ ಠಾಣಾ ಅಧಿಕಾರಿ/ಪೊಲೀಸ್ ಸಿಬ್ಬಂದಿಗಳಿಗೆ ಮತ್ತು ಗಸ್ತಿಗೆ ನೇಮಿಸಲಾಗಿರುವ ಬೀಟ್ ಸಿಬ್ಬಂದಿಗಳಿಗೆ ಮಾಹಿತಿ ಕಲೆ ಹಾಕಿ ಠಾಣಾಧಿಕಾರಿಗಳಿಗೆ/ ಮೇಲಾಧಿಕಾರಿಗಳಿಗೆ ವರದಿ ನೀಡುವಂತೆ ಸೂಚಿಸಲಾಗಿದ್ದು. ಈ ಸಂಬಂಧ ಕೋಲಾರ ಜಿಲ್ಲಾ ಪೊಲೀಸ್ ವತಿಯಿಂದ ಪ್ರಸ್ತುತ ವರ್ಷದಲ್ಲಿ ಈ ಕೆಳಕಂಡಂತೆ ಅಬಕಾರಿ ಪ್ರಕರಣಗಳನ್ನು ದಾಖಲಿಸಲಾಗಿರುತ್ತದೆ.

| Year | No. of cases | No. of Accused Arrested | Seized Property (in lit.) | Value |
|---|---|---|---|---|
| 2023 | 138 | 146 | 517.68 | 2,12,144.00 |

**ಹೆಚ್‌ಡಿ 35 ಪಿಎಸ್‌ಡಿ 2023**

(ಡಾ॥ ಜಿ. ಪರಮೇಶ್ವರ)
ಗೃಹ ಸಚಿವರು